All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

02.12.2025 19.35 p.m.

***************

ಮುಖ್ಯಾಂಶಗಳು

- ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವಿಷಯದ ಕುರಿತು ಚರ್ಚೆಗೆ ಆಗ್ರಹಿಸಿ ಪ್ರತಿಪಕ್ಷಗಳಿಂದ ಮುಂದುವರಿದ ಗದ್ದಲ; ಸಂಸತ್ತಿನ ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಿಕೆ
- ವಂದೇ ಮಾತರಂ ೧೫೦ನೇ ವಾರ್ಷಿಕೋತ್ಸವ ಕುರಿತು ಇದೇ ೮ ರಂದು ಲೋಕಸಭೆಯಲ್ಲಿ ವಿಶೇಷ ಚರ್ಚೆ
- ಜಾಗತಿಕ ಕಡಲ ಬೆದರಿಕೆ ಎದುರಿಸಲು ಭಾರತ ಸನ್ನದ್ಧ - ಭಾರತೀಯ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ
- ವಾರಾಣಸಿಯಲ್ಲಿಂದು ಕಾಶಿ-ತಮಿಳು ಸಂಗಮ್‌ನ ೪ನೇ ಆವೃತ್ತಿಗೆ ಚಾಲನೆ

***************

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವಿಷಯ ಕುರಿತು ಚರ್ಚೆಗೆ ಆಗ್ರಹಿಸಿ, ಪ್ರತಿಪಕ್ಷಗಳ ಗದ್ದಲ ಮುಂದುವರಿದ ಕಾರಣ ಸಂಸತ್ತಿನ ಉಭಯ ಸದನಗಳ ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಲಾಗಿದೆ.

ಲೋಕಸಭೆಯಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ವಿಷಯದ ಕುರಿತು ಚರ್ಚೆಗೆ ವಿರೋಧ ಪಕ್ಷಗಳ ಬೇಡಿಕೆ ಹಿನ್ನೆಲೆಯಲ್ಲಿ ಸದನವನ್ನು ಎರಡು ಬಾರಿ ಮುಂದೂಡಲಾಯಿತು. ನಂತರ ಅಂತಿಮವಾಗಿ ದಿನದ ಮಟ್ಟಿಗೆ ಮುಂದೂಡಲಾಯಿತು. ಎರಡನೇ ಬಾರಿ ಮುಂದೂಡಿಕೆಯ ನಂತರ ಮಧ್ಯಾಹ್ನ ೨ ಗಂಟೆಗೆ ಸದನ ಸೇರಿದಾಗ ವಿರೋಧ ಪಕ್ಷದ ಸದಸ್ಯರು ಸದನದ ಬಾವಿಗಿಳಿದು ಎಸ್‌ಐಆರ್ ವಿರುದ್ಧ ಘೋಷಣೆಗಳನ್ನು ಕೂಗಿದರು.

ಸುಗಮ ಕಲಾಪ ನಡೆಸಲು ಅವಕಾಶ ನೀಡುವಂತೆ ಲೋಕಸಭಾಧ್ಯಕ್ಷರು ಪದೇ ಪದೇ ಮನವಿ ಮಾಡಿದರು. ಆದರೂ ವಿರೋಧ ಪಕ್ಷಗಳು ಪ್ರತಿಭಟನೆ ಮುಂದುವರೆಸಿದ ಕಾರಣ ಸದನವನ್ನು ನಾಳೆಗೆ ಮುಂದೂಡಲಾಯಿತು.

ಮೊದಲ ಮುಂದೂಡಿಕೆಯ ನಂತರ ಮಧ್ಯಾಹ್ನ ೧೨ ಗಂಟೆಗೆ ಸದನ ಸೇರಿದಾಗ ಕಾಂಗ್ರೆಸ್ ಡಿಎಂಕೆ, ಟಿಎಂಸಿ ಸೇರಿದಂತೆ ವಿರೋಧ ಪಕ್ಷದ ಇತರೆ ಸದಸ್ಯರು ತಮ್ಮ ಬೇಡಿಕೆಗೆ ಒತ್ತಾಯಿಸಿ ಸದನದ ಬಾವಿಗಿಳಿದು ಪ್ರತಿಭಟಿಸಿದರು.

ಈ ವೇಳೆ ಮಧ್ಯಪ್ರವೇಶಿಸಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸದನದಲ್ಲಿ ಯಾವುದೇ ವಿಷಯದ ಬಗ್ಗೆ ಚರ್ಚಿಸಲು ಸರ್ಕಾರ ಸಿದ್ಧವಿದೆ. ಗಮನ ಹರಿಸಬೇಕಾದ ಇತರೆ ವಿಷಯಗಳಿವೆ. ಆದರೆ ಒಂದೇ ವಿಷಯದ ಬಗ್ಗೆ ವಿರೋಧ ಪಕ್ಷ ಅಚಲವಾಗಿದೆ ಎಂದು ಹೇಳಿದರು.

ಆದರೆ, ವಿರೋಧ ಪಕ್ಷಗಳು ಘೋಷಣೆಗಳನ್ನು ಮುಂದುವರೆಸಿದ್ದರಿಂದ ಲೋಕಸಭಾಧ್ಯಕ್ಷರು ಸದನವನ್ನು ಮುಂದೂಡಿದರು. ಇದಕ್ಕೂ ಮುನ್ನ ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು, ಜಾರ್ಜಿಯಾ ಸಂಸತ್ತಿನ ಅಧ್ಯಕ್ಷ ಶಲ್ವಾ ಪಪುವಾಶ್ವಿಲಿ ಅವರ ನೇತೃತ್ವದ ಜಾರ್ಜಿಯಾ ಸಂಸದೀಯ ನಿಯೋಗವನ್ನು ಸ್ವಾಗತಿಸಿದರು.

ಭಾರತಕ್ಕೆ ನಿಯೋಗದ ಈ ಭೇಟಿಯು ಉಭಯ ದೇಶಗಳ ನಡುವೆ ಸಂಬಂಧದ ಸಂಕೇತವಾಗಿದ್ದು, ದ್ವಿಪಕ್ಷೀಯ ಸಹಕಾರ ಮತ್ತು ಸಂಬಂಧಗಳನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದರು.

ಇನ್ನೊಂದೆಡೆ, ರಾಜ್ಯಸಭೆಯಲ್ಲಿ ಬಿಹಾರ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಕೇರಳ ಸೇರಿದಂತೆ ಚುನಾವಣೆ ನಡೆಯಲಿರುವ ೧೨ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಚರ್ಚೆಗೆ ವಿರೋಧಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಒತ್ತಾಯಿಸಿದರು.

ಇದರ ಬೆನ್ನಲ್ಲೆ ಆಡಳಿತಾರೂಡ ಪಕ್ಷದ ಸದಸ್ಯರು ಹಾಗೂ ವಿರೋಧ ಪಕ್ಷದ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು. ಈ ವೇಳೆ ಸಭಾಪತಿಗಳು ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಿದರು. ನಂತರ ಪುನಃ ಮಧ್ಯಾಹ್ನ ೨ ಗಂಟೆಗೆ ಸದನ ಸೇರಿದಾಗ ವಿರೋಧ ಪಕ್ಷಗಳು ಘೋಷಣೆ ಕೂಗುವುದನ್ನು ಮುಂದುವರೆಸಿದರು. ಈ ಹಿನ್ನೆಲೆಯಲ್ಲಿ ಕಲಾಪವನ್ನು ನಾಳೆಗೆ ಮುಂದೂಡಲಾಯಿತು.

***************

ಇದೇ ೮ ರಂದು ಲೋಕಸಭೆಯು ರಾಷ್ಟ್ರ ಗೀತೆ ವಂದೇ ಮಾತರಂನ ೧೫೦ನೇ ವಾರ್ಷಿಕೋತ್ಸವದ ಕುರಿತು ವಿಶೇಷ ಚರ್ಚೆಯನ್ನು ನಡೆಸಲಿದೆ. ಇದೇ ೯ ರಂದು ಚುನಾವಣಾ

ಸುಧಾರಣೆ ಕುರಿತು ಚರ್ಚೆ ನಡೆಸಲಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ.

ಸಂಸತ್ ಭವನದಲ್ಲಿಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರ ಅಧ್ಯಕ್ಷತೆಯಲ್ಲಿ ನಡೆದ ಸರ್ವಪಕ್ಷ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಈ ಎರಡು ಚರ್ಚೆಗಳು ಪೂರ್ಣಗೊಂಡ ನಂತರ ಸರ್ಕಾರವು ರಾಜ್ಯಸಭೆಯಲ್ಲೂ ಈ ಕುರಿತ ಚರ್ಚೆಯನ್ನು ಕೈಗೆತ್ತಿಕೊಳ್ಳಲು ಪ್ರಸ್ತಾಪಿಸಲಿದೆ ಎಂದು ಮಾಹಿತಿ ನೀಡಿದರು.

***************

ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು ಪ್ರಸಕ್ತ ಹಣಕಾಸು ವರ್ಷದಲ್ಲಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ೬೮ ಸಾವಿರದ ೩೯೩ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದ ಸಚಿವರು, ಈ ಒಟ್ಟು ಮೊತ್ತದಲ್ಲಿ ೫೭ ಸಾವಿರದ ೮೫೩ ಕೋಟಿ ರೂಪಾಯಿಗಳನ್ನು ವೇತನಕ್ಕೆ ಮತ್ತು ೧೦ ಸಾವಿರದ ೫೪೦ ಕೋಟಿ ರೂಪಾಯಿಗಳನ್ನು ಸಾಮಗ್ರಿ ಹಾಗೂ ಆಡಳಿತಕ್ಕಾಗಿ ಹಂಚಿಕೆ ಮಾಡಲಾಗಿದೆ. ಯೋಜನೆಯಡಿಯಲ್ಲಿ ವೇತನ ಪಾವತಿಗಳನ್ನು ಸರ್ಕಾರವು ನೇರ ವರ್ಗಾವಣೆ ಮೂಲಕ ಫಲಾನುಭವಿಗಳ ಖಾತೆಗಳಿಗೆ ಜಮಾ ಮಾಡುತ್ತದೆ ಎಂದು ಹೇಳಿದರು.

***************

ಮಣಿಪುರ ಸರಕು ಮತ್ತು ಸೇವಾ ತೆರಿಗೆ ಎರಡನೇ ತಿದ್ದುಪಡಿ ಮಸೂದೆ ೨೦೨೫ ಅನ್ನು ರಾಜ್ಯಸಭೆ ಪರಿಗಣನೆಗೆ ತೆಗೆದುಕೊಂಡಿದೆ. ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಇಂದು ಸದನದಲ್ಲಿ ಮಸೂದೆಯನ್ನು ಮಂಡಿಸಿದರು.

ಈ ಮಸೂದೆಯು ಮಣಿಪುರ ಸರಕು ಮತ್ತು ಸೇವಾ ತೆರಿಗೆ ಕಾಯ್ದೆ ೨೦೧೭ಕ್ಕೆ ತಿದ್ದುಪಡಿ ತರಲಿದೆ. ಅಸ್ತಿತ್ವದಲ್ಲಿರುವ ಜಿಎಸ್‌ಟಿ ದರಗಳನ್ನು ಶೇಕಡ ೫ ಮತ್ತು ೧೮ರ ಎರಡು ಮುಖ್ಯ ಸ್ಲಾಬ್‌ಗಳಾಗಿ ಏಕೀಕರಿಸುವ ಯೋಜನೆ ಸೇರಿದಂತೆ ಜಿಎಸ್‌ಟಿ ಮಂಡಳಿಯ ಮುಂದಿನ ನಿರ್ಧಾರಗಳನ್ನು ಜಾರಿಗೆ ತರುವ ಗುರಿಯನ್ನು ಈ ಮಸೂದೆ ಹೊಂದಿದೆ.

***************

ಜಾಗತಿಕ ಕಡಲ ಬೆದರಿಕೆಗಳನ್ನು ಎದುರಿಸಲು ಭಾರತ ಸನ್ನದ್ಧವಾಗಿದೆ ಎಂದು ಭಾರತೀಯ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಸಮುದ್ರ ಮಾರ್ಗಗಳನ್ನು ರಕ್ಷಿಸಲು ಮತ್ತು ಸುಮಾರು ೫.೬ ಬಿಲಿಯನ್ ಡಾಲರ್ ಮೌಲ್ಯದ ಸರಕುಗಳ ಸುರಕ್ಷಿತ ಸಾಗಣೆ ಖಚಿತಪಡಿಸಿಕೊಳ್ಳಲು ಭಾರತದ ನೌಕಾಪಡೆಯು ೪೦ ಮುಂಚೂಣಿ ಹಡಗುಗಳನ್ನು ನಿಯೋಜಿಸಿದೆ ಎಂದು ತಿಳಿಸಿದರು.

ಆಪರೇಷನ್ ಸಿಂಧೂರ್ ಸಮಯದಲ್ಲಿ ಆಕ್ರಮಣಕಾರಿ ನಿಲುವು ಮತ್ತು ಭಾರತೀಯ ವಾಯುಪಡೆಯ ಯುದ್ಧ ಹಡಗುಗಳ ನಿಯೋಜನೆಯ ತಕ್ಷಣದ ಕ್ರಮವು ಪಾಕಿಸ್ತಾನ ನೌಕಾಪಡೆಯನ್ನು ತಮ್ಮ ಬಂದರುಗಳು ಮತ್ತು ಕರಾವಳಿಯಲ್ಲೇ ಉಳಿಯುವಂತೆ ಮಾಡಿತು ಎಂದು ಹೇಳಿದರು.

ಆಪರೇಷನ್ ಸಿಂಧೂರ ಇನ್ನು ಪ್ರಗತಿಯಲ್ಲಿದೆ. ಈ ಕಾರ್ಯಾಚರಣೆಯು ಭಾರತದ ಬದ್ಧತೆ, ಸನ್ನದ್ಧತೆ ಮತ್ತು ಶತೃಗಳನ್ನು ತಡೆಗಟ್ಟುವ ಸಾಮರ್ಥ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ ಎಂದು ಪ್ರತಿಪಾದಿಸಿದರು.

ಆರು ಸುಧಾರಿತ ಜಲಾಂತರ್ಗಾಮಿ ನೌಕೆಗಳನ್ನು ಖರೀದಿಸುವ ಗುರಿ ಹೊಂದಿರುವ ಪ್ರಾಜೆಕ್ಟ್-೭೫ ಇಂಡಿಯಾ ಪ್ರಗತಿಯಲ್ಲಿದೆ. ೨೦೨೯ರ ವೇಳೆಗೆ ೪ ರೆಫೆಲ್ ಯುದ್ಧ ವಿಮಾನಗಳು ಭಾರತಕ್ಕೆ ಹಸ್ತಾಂತರವಾಗುವ ನಿರೀಕ್ಷೆಯಿದೆ. ಅಲ್ಲದೇ ದೇಶೀಯ ಪರಮಾಣು ಬ್ಯಾಲಿಸ್ಟಿಕ್ ಜಲಾಂತರ್ಗಾಮಿ ಐಎನ್‌ಎಸ್ ಅರಿದ್ಮಾನ್ ಅನ್ನು ಶೀಘ್ರದಲ್ಲೇ ನಿಯೋಜಿಸಲಾಗುವುದು ಎಂದು ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ತಿಳಿಸಿದರು.

***************

ಉತ್ತರ ಪ್ರದೇಶದ ವಾರಾಣಸಿಯಲ್ಲಿ ಇಂದು ಸಂಜೆ ಕಾಶಿ-ತಮಿಳು ಸಂಗಮ್‌ನ ೪ನೇ ಆವೃತ್ತಿ ಆರಂಭವಾಯಿತು.

ಉತ್ತರ ಮತ್ತು ದಕ್ಷಿಣ ಭಾರತದ ನಡುವಿನ ಸಂಬಂಧಗಳನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಈ ಕಾರ್ಯಕ್ರಮವನ್ನು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಜಂಟಿಯಾಗಿ ಉದ್ಘಾಟಿಸಿದರು.

ಇನ್ನೊಂದೆಡೆ, ಕಾಶಿ ತಮಿಳು ಸಂಗಮ್ ಸಮಾರಂಭಕ್ಕೆ ಪ್ರಧಾನಿ ನರೇಂದ್ರ ಮೋದಿ ಶುಭ ಹಾರೈಸಿದ್ದಾರೆ.

ಈ ರೋಮಾಂಚಕ ಕಾರ್ಯಕ್ರಮವು ಏಕ ಭಾರತ-ಶ್ರೇಷ್ಠ ಭಾರತ ಉತ್ಸಾಹವನ್ನು ಇನ್ನಷ್ಟು ಹೆಚ್ಚಿಸಲಿದೆ. ಕಾರ್ಯಕ್ರಮದ ಸಮಯದಲ್ಲಿ ನಾಗರಿಕರು ಕಾಶಿಯಲ್ಲಿ ಸ್ಮರಣೀಯ ವಾಸ್ತವ್ಯ ಹೊಂದಲಿ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಆಶಿಸಿದ್ದಾರೆ.

***************

ಒಂದು ಸಾವಿರದ ೮೦೦ ಮೆಗಾವ್ಯಾಟ್‌ಗೂ ಹೆಚ್ಚು ಸಾಮರ್ಥ್ಯವಿರುವ ೯೦ ಸಾವಿರಕ್ಕೂ ಹೆಚ್ಚು ಸರ್ಕಾರಿ ಕಟ್ಟಡಗಳ ಖಾಲಿ ಛಾವಣಿಗಳ ಮೇಲೆ ಸೌರ ಫಲಕಗಳನ್ನು ಅಳವಡಿಸಲಾಗಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಖಾತೆ ರಾಜ್ಯ ಸಚಿವ ಶ್ರೀಪಾದ್ ನಾಯಕ್ ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿ ಪ್ರಶ್ನೊಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೭೮ ಸಾವಿರಕ್ಕೂ ಹೆಚ್ಚು ಸರ್ಕಾರಿ ಕಟ್ಟಡಗಳ ಮೇಲೆ ಸೌರ ಫಲಕಗಳನ್ನು ಅಳವಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಎಲ್ಲಾ ಕೇಂದ್ರ ಸರ್ಕಾರಿ ಸಚಿವಾಲಯಗಳು ಮತ್ತು ಇಲಾಖೆಗಳು ತಮ್ಮ ಒಡೆತನದ ಎಲ್ಲಾ ಕಟ್ಟಡಗಳ ಛಾವಣಿಗಳ ಮೇಲೆ ಸೌರ ಫಲಕಗಳನ್ನು ಸ್ಥಾಪಿಸಲು ಅಗತ್ಯ ನಿರ್ದೇಶನಗಳನ್ನು ನೀಡಲಾಗಿದೆ.

*******ಮುಕ್ತಾಯ*******